**All India Radio: Bangalore**
**Regional Bulletin In Kannada**
**22.10.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.10.2025 / 6.40 p.m.**
**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ’ಎಲಿವೇಟ್’ ಕಾರ್ಯಕ್ರಮ ಯಶಸ್ವಿ; ಅಸಂಖ್ಯಾತ ಉತ್ಸಾಹಿ ನವೋದ್ಯಮಗಳಿಗೆ ಅವಕಾಶ - ಸಚಿವ ಪ್ರಿಯಾಂಕ್ ಖರ್ಗೆ
2. ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ದೀಪಾವಳಿ ಆಚರಣೆ: ಸಾರ್ವಜನಿಕರ ಅನುಕೂಲಕ್ಕೆ ವಿಶೇಷ ರೈಲುಗಳ ವ್ಯವಸ್ಥೆ
3. ಮನ್ರೇಗಾ ಯೋಜನೆ; ಬೆಳಗಾವಿ ಜಿಲ್ಲೆಯಲ್ಲಿ ಐದು ಲಕ್ಷಕ್ಕೂ ಹೆಚ್ಚು ಹಿರಿಯ ನಾಗರಿಕರ ನೋಂದಣಿ
4. ರಾಜ್ಯದಲ್ಲಿ ನೈರುತ್ಯ ಮುಂಗಾರು ಚುರುಕು: ಹಲವೆಡೆ ವ್ಯಾಪಕ ಮಳೆ

<><><><>

ಹೊಸ ಆವಿಷ್ಕಾರಗಳೊಂದಿಗೆ ಬರುವ ನವೋದ್ಯಮಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರಾಜ್ಯಸರ್ಕಾರ ’ಎಲಿವೇಟ್’ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಬಂದಿದೆ ಎಂದು ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಅವರು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿದ್ದು, ಗರಿಷ್ಠ ೫೦ ಲಕ್ಷ ರೂಪಾಯಿ ಪ್ರೋತ್ಸಾಹ ಧನ ನೀಡುವ ಎಲಿವೇಟ್ ಕಾರ್ಯಕ್ರಮವು ಅಸಂಖ್ಯಾತ ಉತ್ಸಾಹಿ ನವೋದ್ಯಮಗಳಿಗೆ ಅವಕಾಶಗಳ ಬಾಗಿಲನ್ನು ತೆರೆದು ಕೊಟ್ಟಿದೆ ಎಂದು ಹೇಳಿದ್ದಾರೆ. ಎಲಿವೇಟ್ ಕಾರ್ಯಕ್ರಮವು ನವೋದ್ಯಮಿಗಳಿಗೆ ಉತ್ಸಾಹ ನೀಡಿದರೆ, ನವೋದ್ಯಮಿಗಳ ತೃಪಿಕರ ಮಾತುಗಳು ನಮಗೆ ಸ್ಫೂರ್ತಿ ನೀಡುತ್ತವೆ ಎಂದಿದ್ದಾರೆ. ಪ್ರತಿಭೆಗಳು, ಹೊಸ ಚಿಂತನೆಗಳು, ಆವಿಷ್ಕಾರಗಳು ಕರ್ನಾಟಕದಲ್ಲಿ ಸಮೃದ್ಧವಾಗಿವೆ. ನಾವಿನ್ಯತೆ, ಆವಿಷ್ಕಾರ, ಹೊಸ ಆಲೋಚನೆಗಳು ನಿರಂತರವಾಗಿರಬೇಕು ಮತ್ತು ಅವುಗಳನ್ನು ಪ್ರೋತ್ಸಾಹಿಸಬೇಕು ಎಂದು ಸಚಿವರು ತಿಳಿಸಿದ್ದಾರೆ.

<><><><>

೨೦೨೫-೨೬ನೇ ಸಾಲಿನಲ್ಲಿ ರಾಜ್ಯ ಸರ್ಕಾರದ ಅನುದಾನ ಹಾಗೂ ಏಷ್ಯಾ ಅಭಿವೃದ್ಧಿ ಬ್ಯಾಂಕ್ ಸಾಲ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ೨೦ಕ್ಕೂ ಹೆಚ್ಚು ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಣಗೊಳಿಸಲಾಗುತ್ತಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಪ್ರತಿ ಶಾಲೆಗೂ ಸುಮಾರು ೪ ಕೋಟಿ ರೂಪಾಯಿ ವೆಚ್ಚದಲ್ಲಿ ಮೂಲಸೌಕರ್ಯ ಕಲ್ಪಿಸಲಾಗುವುದು. ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿ, ಮಕ್ಕಳನ್ನು ಶಾಲೆಗಳಿಗೆ ಆಕರ್ಷಿಸಲಾಗುವುದು ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹೇಳಿದ್ದಾರೆ. ಶಿಕ್ಷಣವೇ ಶಕ್ತಿ ಎಂಬುದನ್ನು ಕೇವಲ ಘೋಷವಾಕ್ಯವಾಗಿಸದೆ ಅದನ್ನು ಅನುಷ್ಠಾನಗೊಳಿಸುವತ್ತ ಬದ್ಧತೆಯಿಂದ ರಾಜ್ಯ ಸರ್ಕಾರ ಮುನ್ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ.

<><><><>

ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಂಡಿರುವ ಗುಂಜಳ್ಳಿ ಬಸಪ್ಪ ಕೆರೆ ಹಾಗೂ ಸುತ್ತಮುತ್ತಲಿನ ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸುವ ಏತ ನೀರಾವರಿ ಕಾಮಗಾರಿಯ ಪ್ರಗತಿಯನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಪರಿಶೀಲಿಸಿದರು. ಈ ವೇಳೆ, ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು, ಶಾಸಕ ಬಸನಗೌಡ ದದ್ದಲ್ ಮತ್ತಿತರರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ರಾಯಚೂರು ಜಿಲ್ಲೆಯ ಪಂಚಮುಖಿಯಲ್ಲಿ ಪಕ್ಷದ ಪದಾಧಿಕಾರಿಗಳೊಂದಿಗೆ ಸಂಘಟನೆ ಹಾಗೂ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಿದರು.

<><><><>

ದೀಪಾವಳಿ ಹಬ್ಬದ ಮೂರನೇ ದಿನವಾದ ಇಂದು ಬಲಿಪಾಡ್ಯಮಿಯನ್ನು ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ವಿಷ್ಣು ವಾಮನ ಮೂರ್ತಿ ಅವತಾರ ತಾಳಿ ಬಲಿಚಕ್ರವರ್ತಿಯನ್ನು ಪಾತಾಳಕ್ಕೆ ತುಳಿದ ದಿನವಾದ ಇಂದು ಬಲಿ ಚಕ್ರವರ್ತಿಯನ್ನು ಸ್ಮರಿಸುವ ಆಚರಣೆಗಳನ್ನು ಕೈಗೊಳ್ಳಲಾಗುತ್ತಿದ್ದು, ಹಲವಾರು ಮನೆತನಗಳಲ್ಲಿ ಬಲಿ ಪೂಜೆಯನ್ನು ನೆರವೇರಿಸುವ ಪರಿಪಾಠವಿದೆ. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.  ಮಲೆನಾಡು ಭಾಗದಲ್ಲಿ ಭೂಮಿ, ಗೋಪೂಜೆ ಮಾಡಿ ಹಬ್ಬ ಆಚರಣೆ ಮಾಡಲಾಗುತ್ತಿದೆ. ದೀಪಾವಳಿ ಅಂಗವಾಗಿ ಚಿಕ್ಕಮಗಳೂರು ಜಿಲ್ಲೆಯ ಮಲ್ಲೇನಹಳ್ಳಿ ದೇವಿರಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಜಾತ್ರಾ ಮಹೋತ್ಸವ ನಡೆಯಿತು. ಮಳೆಯ ನಡುವೆಯು ಭಕ್ತರು ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು.

<><><><>

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಭಾರತೀಯ ರೈಲ್ವೆಯಿಂದ ಹೆಚ್ಚುವರಿ ವಿಶೇಷ ರೈಲುಗಳು ವ್ಯವಸ್ಥೆ ಮಾಡಲಾಗಿದೆ. ಎಸ್ಎಂವಿಟಿ ಬೆಂಗಳೂರು ಹಾಗೂ ಬಿಹಾರದ ದರ್ಭಾಂಗ ನಡುವೆ ಹೆಚ್ಚುವರಿ ರೈಲು ಸಂಚರಿಸುತ್ತಿವೆ. ಈ ಕುರಿತು ನೈರುತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಮಂಜುನಾಥ್ ಕನಮಡಿ ಅವರು ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

****ಧ್ವನಿ**** ಡಾ.ಮಂಜುನಾಥ್ ಕನಮಡಿ

<><><><>

ದಾವಣಗೆರೆ ಜಿಲ್ಲೆಯ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಾಳೆ ಗ್ರಾಮೀಣ ಐಟಿ ರಸಪ್ರಶ್ನೆಯ ಮೊದಲ ಸುತ್ತಿನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಡಿ.ಪಳನಿವೇಲು ತಿಳಿಸಿದ್ದಾರೆ. ಮಹಾನಗರ ಪಾಲಿಕೆ ವ್ಯಾಪ್ತಿಯ ಕಾಲೇಜು ವಿದ್ಯಾರ್ಥಿಗಳನ್ನು ಹೊರತುಪಡಿಸಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆಯಾದ ವಿದ್ಯಾರ್ಥಿಗಳು ಇದೇ ೨೯ ರಂದು ದಾವಣಗೆರೆಯ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯಲಿರುವ ಎರಡನೇ ಸುತ್ತಿನ ಸ್ಪರ್ಧೆಗೆ ಅರ್ಹರಾಗಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><><><>

ಬೆಳಗಾವಿ ಜಿಲ್ಲೆಯಲ್ಲಿ ೬೦ ವರ್ಷಕ್ಕಿಂತ ಮೇಲ್ಪಟ್ಟ ೫ ಲಕ್ಷದ ೭ ಸಾವಿರದ ೯೧೯ ಹಿರಿಯ ನಾಗರಿಕರು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ. ಕಳೆದ ಆರು ತಿಂಗಳಲ್ಲಿ ೩೦ ಸಾವಿರದ ೪೨೯ ಜನರಿಗೆ ಉದ್ಯೋಗ ನೀಡಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ನೋಂದಾಯಿಸಿಕೊಂಡಿರುವ ಹಿರಿಯ ನಾಗರಿಕರ ಸಂಖ್ಯೆ  ಶೇಕಡ ೬೧.೩೬ರಷ್ಟು ಹೆಚ್ಚಾಗಿದೆ. ೨೦೨೫-೨೬ರ ಆರ್ಥಿಕ ವರ್ಷದ ಮೊದಲಾರ್ಧದಲ್ಲಿ, ೮೦ ವರ್ಷಕ್ಕಿಂತ ಮೇಲ್ಪಟ್ಟ ೪೫೭ ವೃದ್ಧರಿಗೆ ಈ ಯೋಜನೆಯ ಮೂಲಕ ಕೆಲಸ ನೀಡಲಾಗಿದೆ. ಕಳೆದ ವರ್ಷ, ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ೪ ಲಕ್ಷದ ೪೬ ಸಾವಿರದ ೭೮೩ ಹಿರಿಯ ನಾಗರಿಕರು ಕಾರ್ಮಿಕರಾಗಿ ನೋಂದಾಯಿಸಿಕೊಂಡಿದ್ದರು. ಈ ಸಂಖ್ಯೆ ಈಗ ೫ ಲಕ್ಷದ ೭ ಸಾವಿರದ ೯೧೯ಕ್ಕೆ ಏರಿದೆ. ತಾಲೂಕುಗಳ ಪೈಕಿ ಹುಕ್ಕೇರಿಯಲ್ಲಿ ಅತಿ ಹೆಚ್ಚು ಹಿರಿಯ ನಾಗರಿಕರು ಕಾರ್ಮಿಕರಾಗಿ ನೋಂದಾಯಿಸಿಕೊಂಡಿದ್ದಾರೆ. ನಂತರ ಅಥಣಿಯಲ್ಲಿ ನೋಂದಣಿ ಮಾಡಿಕೊಂಡಿದ್ದಾರೆ. ಹುಕ್ಕೇರಿಯಲ್ಲಿ, ೬೦ ರಿಂದ ೮೦ ವರ್ಷ ವಯಸ್ಸಿನ ೫೫ ಸಾವಿರದ ೭೬ ಮತ್ತು ೮೦ ವರ್ಷಕ್ಕಿಂತ ಮೇಲ್ಪಟ್ಟ ಒಂದು ಸಾವಿರದ ೬೦೨ ಜನರು ನೋಂದಾಯಿಸಿಕೊಂಡಿದ್ದಾರೆ.

<><><>

ಜನರಲ್ಲಿ ಮಾನಸಿಕ ಆರೋಗ್ಯದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ನಿಮ್ಹಾನ್ಸ್ 'ಮನೋ ಸಂದೇಶ' ಯೂಟೂಬ್‌ನಲ್ಲಿ ವಿಡಿಯೋ ಸರಣಿ ಬಿಡುಗಡೆ ಮಾಡಿದೆ.  ವಯಸ್ಕರಲ್ಲಿ ಮಾನಸಿಕ ಆರೋಗ್ಯ, ಆತ್ಮಹತ್ಯೆ ಸವಾಲು ಸೇರಿದಂತೆ ಎಲ್ಲಾ ವಯೋಮಾನದವರಿಗೂ ಅನ್ವಯಿಸುವ ವಿಷಯಗಳ ಸರಣಿ ಇದಾಗಿದೆ. ಪ್ರಸ್ತುತ ಇಂಗ್ಲಿಷ್ ಭಾಷೆಯಲ್ಲಿ ಇದು ಲಭ್ಯವಿದ್ದು, ಶೀಘ್ರದಲ್ಲಿಯೇ ಕನ್ನಡ ಮತ್ತು ಹಿಂದಿಯಲ್ಲಿ ಮೂಡಿಬರಲಿದೆ.  ಹೊಸ ವಿಡಿಯೋಗಳನ್ನು ಪ್ರತಿ ವಾರ ನಿಮ್ಹಾನ್ಸ್ ಯೂಟೂಬ್ ಚಾನಲ್ www.youtube.com/@nimhans ನಲ್ಲಿ ವೀಕ್ಷಿಸಬಹುದು.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೬ ರಂದು ಆಕಾಶವಾಣಿಯ ತಮ್ಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ.  ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೭ನೇ ಸಂಚಿಕೆಯಾಗಲಿದೆ. ಜನರು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಅನಿಸಿಕೆ ಮತ್ತು ಸಲಹೆಗಳನ್ನು ಸಲ್ಲಿಸಬಹುದು ಅಥವಾ ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈ ಗೌವ್ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಗೆ ಸಲಹೆಗಳನ್ನು ಇದೇ ೨೪ ರವರೆಗೆ ಸ್ವೀಕರಿಸಲಾಗುವುದು.

<><><>

ಇನ್ನು ಹವಾವರ್ತಮಾನ

ರಾಜ್ಯದಲ್ಲಿ ನೈಋತ್ಯ ಮುಂಗಾರು ಚುರುಕಾಗಿದ್ದು, ಕರಾವಳಿ, ದಕ್ಷಿಣ ಒಳನಾಡಿನ ಬಹುತೇಕ ಕಡೆ ಉತ್ತರ ಒಳನಾಡಿನ ಕೆಲವೆಡೆ ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆ ಕುಮುಟಾ, ಮಂಕಿಯಲ್ಲಿ ೫, ಬಂಟ್ವಾಳ ೪, ಬೆಳ್ತಂಗಡಿ, ಗಂಗಾವತಿ, ಕದ್ರಾ, ಕಾರ್ಕಳ, ಮಂಗಳೂರು, ಮೂಡುಬಿದರೆ ಸೇರಿದಂತೆ ಹಲವೆಡೆ ೩ ಸೆಂಟಿಮೀಟರ್ ಮಳೆಯಾಗಿದೆ. ಮುಂದಿನ ೭ ದಿನಗಳ ಕಾಲ ರಾಜ್ಯದ ಹಲವೆಡೆ ಭಾರೀ ಅಥವಾ ಹಗುರದಿಂದ ಸಾಧಾರಣ ಮಳೆ

ಸಾಧ್ಯತೆ ಇರುವುದಾಗಿ ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿ ಭಾಗದಲ್ಲಿ ಗಂಟೆಗೆ ೩೫ ರಿಂದ ೪೫ ಕಿಲೋಮಿಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ ಇರಲಿದ್ದು, ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಷಿಯಸ್ ತಾಪಮಾನ ದಾಖಲಾಗುವ ಸಾಧ್ಯತೆ ಇದೆ.

<><> ಇಲ್ಲಿಗೆ ಪ್ರದೇಶ ಸಮಾಚರ ಮುಗಿಯಿತು <><>